ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) ಯಾವುದೇ ಖಾಸಗಿ ವಿಶ್ವವಿದ್ಯಾಲಯ ಅಸ್ತಿತ್ವದಲ್ಲಿಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಬೆಂಗಳೂರಿನಲ್ಲಿ ಕೇಂದ್ರಿಯ ವಿಶ್ವವಿದ್ಯಾಲಯ ಪ್ರಾರಂಭಿಸುವುದು

92 (78) : ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಕೇಂದ್ರೀಯ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ;

ಆ) ಇಲ್ಲದಿದ್ದಲ್ಲಿ, ಈ ಬಗ್ಗೆ ಪ್ರಸ್ತಾವನೆ ಕಳುಹಿಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಬೆಂಗಳೂರಿನ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಕೈಗೊಂಡಿರುವ ಕಾಮಗಾರಿ

93 (80) : ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2002–03 ಮತ್ತು 2003–04ನೇ ಸಾಲಿನಲ್ಲಿ ಬೆಂಗಳೂರಿನ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಕೈಗೊಂಡಿರುವ ನಿರ್ಮಾಣ ಕಾಮಗಾರಿಗಳಾವುವು;

ಆ) ಅದಕ್ಕಾಗಿ ಇದುವರೆವಿಗೂ ಖರ್ಚು ಮಾಡಿರುವ ಮೊತ್ತವೆಷ್ಟು;

ಇ) ಸದರಿ ಕಾಮಗಾರಿಗಳ ಸಧ್ಯದ ಪರಿಸ್ಥಿತಿಯೇನು;

ಈ) ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಬೇಕಾಗುವ ಮೊತ್ತವೆಷ್ಟು;

ಉ) 2004–05ನೇ ಸಾಲಿಗೆ ಎಷ್ಟು ಮೊತ್ತವನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು)

ಅ) 2002–03ನೇ ಸಾಲಿಗೆ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ. 2003–04ನೇ ಸಾಲಿನಲ್ಲಿ ಯಾವುದೇ ಕಾಮಗಾರಿಗಳು ಆಗಿರುವುದಿಲ್ಲ.

ಆ) ಅನುಬಂಧದಲ್ಲಿ ತೋರಿಸಲಾಗಿದೆ.

ಇ) ಅನುಬಂಧದಲ್ಲಿ ತೋರಿಸಲಾಗಿದೆ.

ಈ) 2002–03ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳು ಪೂರ್ಣಗೊಂಡಿರುವುದರಿಂದ ಅನುದಾನದ ಅಗತ್ಯವಿರುವುದಿಲ್ಲ.

ಉ) ಸದರಿ ಕಾಲೇಜಿಗೆ ಹೆಚ್ಚುವರಿ ಕಾಮಗಾರಿಗೆ ಬೇಡಿಕೆ ಇಲ್ಲದಿರುವುದರಿಂದ 2004–05ನೇ ಸಾಲಿಗೆ ಇಲಾಖೆ ವತಿಯಿಂದ ಅನುದಾನ ಬಿಡುಗಡೆ ಮಾಡಲು ಉದ್ದೇಶಿಸಿರುವುದಿಲ್ಲ.